# KUVEMPU UNIVERSITY

## SAHYADRI SCIENCE COLLEGE, SHIMOGA – 577 203
(Constituent Autonomous College of Kuvempu University)

## ಸಹ್ಯಾದ್ರಿ ವಿಜ್ಞಾನ ಕಾಲೇಜು (ಸ್ವಾಯತ್ತ), ಶಿವಮೊಗ್ಗ – 577 203

Phone: 08182-240435; 240260 Fax: 08182-240138 e-mail: sscautcontroller@gmail.com web: www.sahyadriscience college.org

ಸಂಖ್ಯೆ: ಕುವಿ/ಸವಿಕಾಶಿ(ಸ್ವಾ)/ಪನಿ/152/2015–16

ಪರೀಕ್ಷಾ ನಿಯಂತ್ರಣಾಧಿಕಾರಿಗಳ ಕಾರ್ಯಾಲಯ,
ದಿನಾಂಕ: 03–03–2016

## ಪರೀಕ್ಷಾ ಪ್ರಕಟಣೆ

ವಿಷಯ : ಮೇ/ಜೂನ್ –2016 ರಲ್ಲಿ ನಡೆ ಯುವ B.Sc/B.C.A/B.Sc(Honors)/ M.Sc (Honors)/ BBA/M.T.A., ಪದವಿ ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸುವ ಮತ್ತು ಶುಲ್ಕ ಪಾವತಿಸುವ ಕುರಿತು.

– 0 –

ಸಹ್ಯಾದ್ರಿ ವಿಜ್ಞಾನ ಸ್ವಾಯತ್ತ ಕಾಲೇಜಿನ ವಿವಿಧ ಸ್ನಾತಕ/ಸ್ನಾತಕೋತ್ತರ ಪದವಿಯ ಪ್ರಾಯೋಗಿಕ ಪರೀಕ್ಷೆಗಳು ದಿನಾಂಕ: **25–04–2016** ರಿಂದ ಹಾಗೂ ಲಿಖಿತ ಪರೀಕ್ಷೆಗಳು ದಿನಾಂಕ: **11–05–2016** ರಿಂದ ಪ್ರಾರಂಭವಾಗುತ್ತದೆ. ವಿವರವಾದ ವೇಳಾಪಟ್ಟಿಯನ್ನು ನಂತರ ತಿಳಿಸಲಾಗುವುದು.

ಪರೀಕ್ಷೆ ತೆಗೆದುಕೊಳ್ಳಲು ನಿಯಮಾನುಸಾರ ಅರ್ಹರಾದ ಅಭ್ಯರ್ಥಿಗಳು **ಆನ್‌ಲೈನ್ ಮುಖಾಂತರ** ಪರೀಕ್ಷಾ ಅರ್ಜಿಗಳನ್ನು ಭರ್ತಿಮಾಡಿ ನಿಗದಿತ ದಿನಾಂಕದೊಳಗೆ ಶುಲ್ಕ ಸಂದಾಯ ಮಾಡಿ ಕಾಲೇಜಿನ ಪ್ರಾಂಶುಪಾಲರ ಮೂಲಕ ಪರೀಕ್ಷಾ ನಿಯಂತ್ರಾಣಾಧಿಕಾರಿಗಳಿಗೆ ಸಲ್ಲಿಸಲು ತಿಳಿಸಲಾಗಿದೆ.

**ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು :**

01. **ದಂಡ ಶುಲ್ಕವಿಲ್ಲದೆ** : 04–03–2016 **ರಿಂದ** 19–03–2016 **ರ ವರೆಗೆ**
02. **ದಂಡ ಶುಲ್ಕ ರೂ.** 100=00**ರಂತೆ** : 21–03–2016 **ರಿಂದ** 24–03–2016 **ರ ವರೆಗೆ**

| ವಿವರ | B.Sc., 1,2,3,4,5, ಮತ್ತು 6ನೇ ಸೆಮಿಸ್ಟರ್ (ಪ್ರತಿ ಸೆಮಿಸ್ಟರ್ ಗಳಿಗೆ ಪ್ರತ್ಯೇಕವಾಗಿ) | B.C.A.,/B.B.A., 1,2,3,4,5, ಮತ್ತು 6ನೇ ಸೆಮಿಸ್ಟರ್ (ಪ್ರತಿ ಸೆಮಿಸ್ಟರ್ ಗಳಿಗೆ ಪ್ರತ್ಯೇಕವಾಗಿ) | ಷರಾ |
|---|---|---|---|
| ಪ್ರತಿ ಥಿಯರಿಪತ್ರಿಕೆಗೆ ಪ್ರತ್ಯೇಕವಾಗಿ (ಪ್ರತಿ ಸೆಮಿಸ್ಟರ್‌ನ ಎಲ್ಲಾ ಪತ್ರಿಕೆಗಳಿಗೆ) | ರೂ. 125/- | ರೂ. 145/- | ಅಂಚೆ ಶುಲ್ಕ ಪ್ರತ್ಯೇಕ |
| ಪ್ರತಿ ಪ್ರಾಯೋಗಿಕ ಪತ್ರಿಕೆಗೆ | ರೂ. 80/- | ರೂ. 80/- | |
| ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | ರೂ.145/- | ರೂ.145/- | |
| ಸೆಮಿಸ್ಟರ್‌ನ ಪೂರ್ಣ ಪರೀಕ್ಷೆಗೆ | ರೂ.535/– ಮೀರದಂತೆ (ಪ್ರತಿ ಸೆಮಿಸ್ಟರ್‌ಗಳಿಗೆ ಪ್ರತ್ಯೇಕವಾಗಿ) | ರೂ.805/– ಮೀರದಂತೆ(ಪ್ರತಿ ಸೆಮಿಸ್ಟರ್‌ಗಳಿಗೆ ಪ್ರತ್ಯೇಕವಾಗಿ) | |

| Integrated B.Sc.,/ M.Sc.,(Honors)/M.T.A., | | | | | |
|---|---|---|---|---|---|
| | | ಪರೀಕ್ಷಾ ಶುಲ್ಕ | ಅಂಕಪಟ್ಟಿ ಶುಲ್ಕ | ಒಟ್ಟು ಶುಲ್ಕ | ಷರಾ |
| 1) | ಪ್ರತಿ ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ (ಪ್ರತ್ಯೇಕವಾಗಿ) | ರೂ. 1335/– | ರೂ. 145/– | ರೂ. 1480/– | ಅಂಚೆ ಶುಲ್ಕ ಪ್ರತ್ಯೇಕ |
| 2) | ಯಾವುದೇ ಸೆಮಿಸ್ಟರ್‌ನ ಒಂದು ಪತ್ರಿಕೆಗೆ (ಥಿಯರಿ) (ಪ್ರತಿ ಸೆಮಿಸ್ಟರ್ ಪ್ರತ್ಯೇಕವಾಗಿ) | ರೂ. 265/– | ರೂ. 145/– | ರೂ. 410/– | |
| 3) | ಯಾವುದೇ ಸೆಮಿಸ್ಟರ್‌ನ ಒಂದು ಪ್ರಾಯೋಗಿಕ ಪರೀಕ್ಷೆಗೆ (ಪ್ರತಿ ಸೆಮಿಸ್ಟರ್ ಪ್ರತ್ಯೇಕವಾಗಿ) | ರೂ. 265/– | ರೂ. 145/– | ರೂ. 410/– | |

**: ವಿಶೇಷ ಸೂಚನೆ :**

**2006–07, 2007–08, 2008–09 ಮತ್ತು 2009–10ನೇ ಸಾಲಿನ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕದೊಂದಿಗೆ ವಿಶೇಷ ದಂಡ ಶುಲ್ಕ ರೂ. 1,500/– ಗಳನ್ನು ಪಾವತಿಸತಕ್ಕದ್ದು.**

ಪು. ತಿ. ನೋ.

**ವಿದ್ಯಾರ್ಥಿಗಳಿಗೆ ಸೂಚನೆ :**

1. ವಿದ್ಯಾರ್ಥಿಗಳು (Online) **ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು** student.logisys.net.in/ssc ನಲ್ಲಿ login ಆಗಿ ನೊಂದಣಿ ಸಂಖ್ಯೆ ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕದ ವಿವರಗಳ್ಳುಳ **ಅರ್ಜಿ ಮುದ್ರಿಸಿ ಅಂಚೆ ಕಛೇರಿಯಲ್ಲಿ ನಗದು ರೂಪದಲ್ಲಿ ಶುಲ್ಕ ಭರಿಸಿದ** ನಂತರ ಪ್ರತಿಯನ್ನು ಕಾಲೇಜಿನ ಕಛೇರಿಯ ಸಂಬಂಧಿಸಿದ ವಿಷಯನಿರ್ವಾಹಕರಿಗೆ ಸಲ್ಲಿಸಬೇಕು.

2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಆನ್‌ಲೈನ್‌ನಲ್ಲಿ ಚಲನ್ ಮುದ್ರಿಸಿಕೊಂಡು ಅಂಚೆ ಕಛೇರಿ ಮುಖಾಂತರ ಪಾವತಿಸಿದ ನಂತರ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

3. ರೂ.2.5 ಲಕ್ಷ ಅಥವಾ ಅದಕ್ಕಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ FRESHERS ವಿದ್ಯಾರ್ಥಿಗಳಿಗೆ ಮಾತ್ರ ನಿಯಮಾನುಸಾರ ಶುಲ್ಕ ವಿನಾಯಿತಿ ಇರುತ್ತದೆ. ಆದರೆ ಅಂತಹ ವಿದ್ಯಾರ್ಥಿಗಳು ಅಂಕಪಟ್ಟಿ ಶುಲ್ಕ ರೂ.145–00ಗಳನ್ನು ಪಾವತಿಸಬೇಕು.

4. ರೂ.2.5 ಲಕ್ಷಗಳ ಆದಾಯಕ್ಕಿಂತ ಮೇಲ್ಪಟ್ಟ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

5. ವಿನಾಯಿತಿ ಹೊಂದಿರುವ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕವನ್ನು ಅವರುಗಳಿಗೆ ಮಂಜೂರಾಗುವ ವಿದ್ಯಾರ್ಥಿ ವೇತನದಿಂದ ಕಟಾಯಿಸಿ ಕೆನರಾ ಬ್ಯಾಂಕ್ Account No. 13100ಕ್ಕೆ ಜಮಾ ಮಾಡಬೇಕು. ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸದೇ ಇರುವ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿ ವೇತನ ಮಂಜೂರಾಗದ ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕ ಪಾವತಿಸಬೇಕು.

6. ಒಂದು ಲಕ್ಷಗಳಿಗಿಂತ ಕಡಿಮೆ ಕುಟುಂಬದ ವಾರ್ಷಿಕ ಆದಾಯವನ್ನು ಹೊಂದಿರುವ ಮತ್ತು ಪ್ರವರ್ಗ–1, 2ಎ, 2ಬಿ, 3ಎ, 3ಬಿ FRESHERS ವಿದ್ಯಾರ್ಥಿಗಳು ಪೂರ್ಣ ಪರೀಕ್ಷಾ ಶುಲ್ಕವನ್ನು ಪಾವತಿಸಬೇಕು. ಆದರೆ, ವಿದ್ಯಾರ್ಥಿಗಳ ಅರ್ಹತೆ ಮತ್ತು ಮೆರಿಟ್ ಆಧರಿಸಿ ಸರ್ಕಾರದ ಅನುದಾನದ ಲಭ್ಯತೆಗೆ ಒಳಪಟ್ಟು ಶುಲ್ಕ ಮರುಭರಿಕೆ ಮೊತ್ತವನ್ನು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಇಲಾಖೆಯಿಂದ ನೇರವಾಗಿ ಆಯಾ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಎನ್.ಇ.ಎಫ್.ಟಿ. ವ್ಯವಸ್ಥೆ ಮೂಲಕ ಜಮಾ ಮಾಡಲಾಗುವುದೆಂದು ಸರ್ಕಾರದ ಆದೇಶ ಸಂಖ್ಯೆ: ಸ.ಕ.ಇ./201/ಬಿ.ಎಂ.ಎಸ್/2011 ಬೆಂಗಳೂರು ದಿನಾಂಕ: 23–06–2012ರಲ್ಲಿ ತಿಳಿಸಿರುತ್ತಾರೆ.

**ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಮೇಲ್ಕಂಡ ಮೀಸಲಾತಿಗೆ ಒಳಪಡುವ ವರ್ಗಗಳ ಮರುಯತ್ನದ (REPEATERS)ವಿದ್ಯಾರ್ಥಿಗಳಿಗೆ ಹಾಗೂ ದಂಡ ಶುಲ್ಕದೊಂದಿಗೆ ಪರೀಕ್ಷಾ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಯಾವುದೇ ಶುಲ್ಕ ವಿನಾಯ್ತಿ ಇರುವುದಿಲ್ಲ.**

ಶುಲ್ಕ ವಿನಾಯಿತಿ ಬಯಸುವ ಎಲ್ಲಾ ವಿದ್ಯಾರ್ಥಿಗಳು ಸಕ್ಷಮ ಅಧಿಕಾರಿಗಳಿಂದ ಪಡೆದ ಜಾತಿ/ಆದಾಯ ಪ್ರಮಾಣ ಪತ್ರದ ಪ್ರತಿಗಳನ್ನು ಕಡ್ಡಾಯವಾಗಿ ಕಾಲೇಜಿಗೆ ಪರೀಕ್ಷಾ ಅರ್ಜಿಯೊಂದಿಗೆ ಸಲ್ಲಿಸಬೇಕು.

## ಪ್ರಾಚಾರ್ಯರಿಗೆ ಸೂಚನೆಗಳು

1. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಿ ಸಲ್ಲಿಸಿದ ಚಲನ್‌ನ್ನು ಪರಿಶೀಲಿಸಿ ಕೊನೆ ದಿನಾಂಕದಿಂದ ಎರಡು ದಿನದೊಳಗಾಗಿ ಪ್ರಾಂಶುಪಾಲರ ಮೇಲುಸಹಿಯೊಂದಿಗೆ ಚಲನ್ ಪ್ರತಿ ಹಾಗೂ ಇತರೆ ದಾಖಲೆಗಳೊಂದಿಗೆ ಪರೀಕ್ಷಾ ವಿಷಯ ನಿರ್ವಾಹಕರಿಗೆ ಸಲ್ಲಿಸಬೇಕು. ನಂತರ ಕಳುಹಿಸುವ ಅರ್ಜಿಗಳನ್ನು ಮಾನ್ಯಮಾಡುವುದಿಲ್ಲ.

2. **ಕುಲಸಚಿವರಿಂದ ಪ್ರವೇಶಾತಿ ಅನುಮೋದನೆಯಾಗದ / ಕಡಿಮೆ ಹಾಜರಾತಿ ಇರುವ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.** ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.

**ಪು. ತಿ. ನೋ.**

3. ವಿದ್ಯಾರ್ಥಿಗಳ ಆಂತರಿಕ ಅಂಕಗಳನ್ನು ವಿದ್ಯಾರ್ಥಿಗಳ ಗಮನಕ್ಕೆ ತಂದು, ವಿದ್ಯಾರ್ಥಿಗಳ ಸಹಿ ಪಡೆದು. ಆನ್‌ಲೈನ್ ಮೂಲಕ ನಮೂದಿಸಿ ನಂತರ Freeze ಮಾಡಬೇಕು. ನಂತರದ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

4. ಯಾವುದೇ ವಿದ್ಯಾರ್ಥಿಯ ಆಂತರಿಕ ಅಂಕ ಬಿಟ್ಟುಹೋದಲ್ಲಿ ಯಾವ ಕಾರಣಕ್ಕೂ ಹಾರ್ಡ್‌ಕಾಪಿಯನ್ನು ಕಳುಹಿಸಿಕೊಟ್ಟಲ್ಲಿ ಅದನ್ನು ಪರಿಗಣಿಸಲಾಗುವುದಿಲ್ಲ ಅಂತಹ ಮನವಿಗಳನ್ನು ತಿರಸ್ಕರಿಸಲಾಗುವುದು.

–Sd-
**ಪರೀಕ್ಷಾ ನಿಯಂತ್ರಣಾಧಿಕಾರಿಗಳು**

**ಗೆ :–**

01) ಪ್ರಾಚಾರ್ಯರು, ಸಹ್ಯಾದ್ರಿ ವಿಜ್ಞಾನ ಕಾಲೇಜು (ಸ್ವಾಯತ್ತ), ಶಿವಮೊಗ್ಗ.
02) ಆಪ್ತ ಕಾರ್ಯಾಲಯ:– ಕುಲಪತಿಗಳು / ಕುಲಸಚಿವರು / ಹಣಕಾಸು ಅಧಿಕಾರಿಗಳು / ಕುಲಸಚಿವರು(ಪ), ಕು ವಿ ವಿ, ಶಂಕರಘಟ್ಟ.
03) ಅಧೀಕ್ಷಕರು:– ಸಿಬ್ಬಂದಿ ವಿಭಾಗ / ಲೆಕ್ಕ ಶಾಖೆ ವಿಭಾಗ, ಸಹ್ಯಾದ್ರಿ ವಿಜ್ಞಾನ ಕಾಲೇಜು (ಸ್ವಾ), ಶಿವಮೊಗ್ಗ
04) ವಿಷಯ ನಿರ್ವಾಹಕರು:– ಪರೀಕ್ಷೆ/ಕ್ಯಾಷ್ ಕೌಂಟರ್/ಸ್ಟೇಷನರಿ, ಸಹ್ಯಾದ್ರಿ ವಿಜ್ಞಾನ ಕಾಲೇಜು (ಸ್ವಾಯತ್ತ), ಶಿವಮೊಗ್ಗ. – **ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.**
05) ಕಛೇರಿ ಪ್ರತಿ.